ಟ್ರಾನ್ಸ್‌ಫಾರ್ಮರ್‌ಗಳಲ್ಲಿ ಮಾಪಕಗಳನ್ನು ಅಳವಡಿಸಿ, ವಿತರಣಾ ಟ್ರಾನ್ಸ್‌ಫಾರ್ಮರ್‌ವಾರು ಎನರ್ಜಿ ಆಡಿಟ್‌ನ್ನು ಕಟ್ಟುನಿಟ್ಟಾಗಿ ಕೈಗೊಳ್ಳಲಾಗುತ್ತಿದೆ ಹೆಚ್ಚಿನ ನಷ್ಟ ಹೊಂದಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳಿಂದ ವಿದ್ಯುತ್ ಸರಬರಾಜು ಪಡೆಯುವ ವಿದ್ಯುತ್ ಗ್ರಾಹಕರ ವಿರುದ್ಧ ಜಾಗೃತ ದಳವು ವಿಶೇಷ ಗಮನವನ್ನು ಹರಿಸಿ, ವಿದ್ಯುತ್ ಕಳ್ಳತನದ ಪ್ರಕರಣಗಳನ್ನು ಪತ್ತೆ ಹಚ್ಚುತ್ತಿದೆ

4 ವಾಣಿಜ್ಯ ಮತ್ತು ಕೈಗಾರಿಕೆಗಳ ಸ್ಥಾವರಗಳಲ್ಲಿ ಸಾಮಾನ್ಯವಾಗಿ ವಿದ್ಯುತ್ ಕಳ್ಳತನ ಸಂಭವಿಸುವ ಪ್ರಮೇಯಗಳು ಹೆಚ್ಚಾಗಿರುವುದರಿಂದ ವಾಣಿಜ್ಯ ಮತ್ತು ಕೈಗಾರಿಕೆಗಳ ಸ್ಥಾವರಗಳ ಬಗ್ಗೆ ಹೆಚ್ಚಿನ ನಿಗಾವನ್ನು ವಹಿಸಲಾಗುತ್ತಿದೆ

5 ಜಾಗೃತ ದಳದ ಘಟಕಗಳನ್ನು ಪೊಲೀಸ್ ಠಾಣೆಗಳೆಂದು ಘೋಷಿಸಲಾಗಿದ್ದು, ವಿತರಣಾ ಕಂಪನಿಗಳ ಪೊಲೀಸ್ ಅಧಿಕಾರಿಗಳೇ ವಿದ್ಯುತ್ ಕಳವು ಪ್ರಕರಣಗಳಲ್ಲಿ ಕೇಸು ದಾಖಲಿಸಿ ತನಿಖೆ ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ

6 ವಿದ್ಯುತ್ ಕಳ್ಳತನ ವಿರೋಧಿ ಕಾನೂನು ಬಲಪಡಿಸಲಾಗಿದ್ದು ಇದನ್ನು 10-4-2002ರಿಂದ ಕಟ್ಟುನಿಟ್ಟಾಗಿ ಜಾರಿ ಗೊಳಿಸಲಾಗಿರುತ್ತದೆ

7 ಬಿಲ್ಲಿಂಗ್ ವ್ಯವಸ್ಥೆಯನ್ನು ಗಣಕೀಕರಣಗೊಳಿಸಲಾಗಿದ್ದು, ಮಾನವ ಹಸ್ತಕ್ಷೇಪವನ್ನು ತಡೆಗಟ್ಟಲಾಗುತ್ತಿದೆ

902(581) ಡಾ ಮಹದೇವಪ್ಪ ಹೆಚ್ ಸಿ (ಟಿ ನರಸೀಪುರ) ಮಾನ್ಯ ಒಳಾಡಳಿತ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು,

ಇ) ದೌರ್ಜನ್ಯಕ್ಕೆ ಒಳಗಾದ ದಲಿತ ಕುಟುಂಬಗಳಿಗೆ ಸರ್ಕಾರದಿಂದ ರಕ್ಷಣೆ ನೀಡಲಾಗಿದೆಯೇ,

ಈ) ಹಾಗಿದ್ದಲ್ಲಿ, ಯಾವ ರೀತಿಯಲ್ಲಿ ರಕ್ಷಣೆ ನೀಡಲಾಗಿದೆ,

ಊ) ದಲಿತರ ಮೇಲೆ ದೌರ್ಜನ್ಯವೆಸಗಿದವರ ಮೇಲೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ ಪಿ ಪ್ರಕಾಶ್ (ಒಳಾಡಳಿತ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ಹೌದು

ಆ) 1) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆ, 1989ರ ಕಲಂ 14ರ ರೀತ್ಯಾ ಮೈಸೂರು, ಬೆಳಗಾಂ, ಬಿಜಾಪುರ, ರಾಯಚೂರು, ಕೋಲಾರ, ಗುಲ್ಬರ್ಗಾ ಮತ್ತು ತುಮಕೂರು ಜಿಲ್ಲೆಗಳಲ್ಲಿ ವಿಶೇಷ ನ್ಯಾಯಾಲಯವನ್ನು ಸ್ಥಾಪಿಸಲಾಗಿದೆ ಅದೇ ರೀತ್ಯಾ ತ್ವರಿತಗತಿಯಲ್ಲಿ ಪ್ರಕರಣಗಳ ವಿಲೇವಾರಿಗಾಗಿ ಉಳಿದ ಜಿಲ್ಲೆಗಳಲ್ಲಿನ ಜಿಲ್ಲಾ ಸತ್ರ ನ್ಯಾಯಾಲಯಗಳನ್ನು ಕಲಂ 14ರ ಮೇಲ್ಕಂಡ ಕಾಯ್ದೆಯಡಿ ವಿಶೇಷ ನ್ಯಾಯಾಲಯಗಳನ್ನಾಗಿ ನಾಮಕರಣ ಮಾಡಲಾಗಿರುತ್ತದೆ

2) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆ, 1989ರ ಕಲಂ 15ರ ರೀತ್ಯಾ ವಿಶೇಷ ನ್ಯಾಯಾಲಯದಲ್ಲಿ ಕೆಲಸ ಮಾಡುತ್ತಿರುವ ಸರ್ಕಾರಿ ಅಭಿಯೋಜಕರನ್ನು ವಿಶೇಷ ಸರ್ಕಾರಿ ಅಭಿಯೋಜಕರೆಂದು ನಾಮಕರಣ ಮಾಡಲಾಗಿದೆ

3) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆ, 1989ರ ಕಲಂ 9ರ ರೀತ್ಯಾ ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್, (ಕಾನೂನು ಮತ್ತು ಸುವ್ಯವಸ್ಥೆ) ರವರನ್ನು ಸಮನ್ವಯ (ನೋಡಲ್) ಅದಿಕಾರಿಯನ್ನಾಗಿ ನೇಮಿಸಲಾಗಿದೆ

4) ದೌರ್ಜನ್ಯ ಪ್ರಕರಣಗಳ ಪರಿಮಾರ್ಣ ಅಭಿಯೋಜನೆಗಾಗಿ, ನೊಂದವರಿಗೆ ಮತ್ತು ಸಾಕ್ಷಿಗಳಿಗೆ ಪ್ರವಾಸ ಭತ್ಯೆ, ದಿನ ಭತ್ಯೆ ಮತ್ತು ನಿರ್ವಹಣೆ ಭತ್ಯೆಯನ್ನು ಕೊಡಲು ಕ್ರಮ ತೆಗೆದುಕೊಳ್ಳಲಾಗಿದೆ

5) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 12ರ ರೀತ್ಯಾ ನೊಂದವರಿಗೆ ಪರಿಹಾರ ಧನ ನೀಡುವುದರ ಜೊತೆಗೆ ಇನ್ನಿತರೆ ಸಹಾಯ ಮತ್ತು ಮನರ್ ವಸತಿ ಸೌಕರ್ಯ ಒದಗಿಸಲು ಜಿಲ್ಲಾ ಆಡಳಿತವನ್ನು ಉತ್ತೇಜಿಸಲಾಗಿದೆ

6) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 15ರ ರೀತ್ಯಾ ಪರಿಣಾಮಕಾರಿಯಾಗಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆಯನ್ನು

ಜಾರಿಗೊಳಿಸಲು ಕರ್ನಾಟಕ ಸರ್ಕಾರದ ಮಾದರಿ ಸಂಭವನೀಯ ಯೋಜನೆಯನ್ನು (model contingency plan) ತಯಾರಿಸಿ ಗೆಜೆಟ್‌ನಲ್ಲಿ ಪ್ರಕಟಣೆ ಮಾಡಲಾಗಿರುತ್ತದೆ ಈ ಸಂಭವನೀಯ ಯೋಜನೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆಯನ್ನು ಬೇರೆ ಬೇರೆ ಇಲಾಖೆಯ ಅಧಿಕಾರಿಗಳು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅವರುಗಳ ಪಾತ್ರ ಮತ್ತು ಜವಾಬ್ದಾರಿಯನ್ನು ಸ್ಪಷ್ಟವಾಗಿ ಹೇಳಲಾಗಿದೆ

(7) ನಿಯಮ 16ರಡಿ ಒಂದು ಹೈಪವರ್ ವಿಜಿಲೆನ್ಸ್ ಅಂಡ್ ಮಾನಿಟರಿಂಗ್ ಕಮಿಟಿಯನ್ನು ದಿನಾಂಕ 20–5–2000ರ ಆದೇಶದನ್ವಯ ಸಂಯೋಜಿಸಿದೆ

(8) ಸರ್ಕಾರಿ ಆದೇಶ ಸಂಖ್ಯೆ ದಿನಾಂಕ 15–12–2000ರನ್ವಯ ಮಾನ್ಯ ಮುಖ್ಯಮಂತ್ರಿಯವರ ನೇತ್ವತೃದಲ್ಲಿ ಒಂದು ಹೈಪವರ್ ಸ್ಟೇಟ್ ಲೆವಲ್ ಕಮಿಟಿಯನ್ನು ಸ್ಥಾಪಿಸಲಾಗಿದೆ ಈ ಕಮಿಟಿಯು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆ 1989 ಮತ್ತು ನಿಯಮ 1995ಗಳನ್ನು ಪರಿಣಾಮಕಾರಿಯಾಗಿ ಜಾರಿ ಗೊಳಿಸಲಾಗುತ್ತಿದೆಯೇ ಅಥವಾ ಇಲ್ಲವೇ ಎಂಬುವುದರ ಬಗ್ಗೆ ಪರಿಶೀಲನೆ ಮಾಡುತ್ತದೆ

(9) ಜಿಲ್ಲಾ ಮ್ಯಾಜಿಸ್ಟ್ರೇಟರ ನೇತೃತ್ವದಲ್ಲಿ ನಿಯಮ 17ರ ಪ್ರಕಾರ ಒಂದು ಡಿಸ್ಟ್ರಿಕ್ಟ್ ಲೆವೆಲ್ ವಿಜಿಲೆನ್ಸ್ ಮತ್ತು ಮಾನಿಟರಿಂಗ್ ಕಮಿಟಿಯನ್ನು ಸಂಯೋಜಿಸಲಾಗಿದೆ

(10) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಜನಾಂಗಕ್ಕೆ ಸೇರಿದ ಒಬ್ಬ ಶಾಸಕರ ನೇತೃತ್ವದಲ್ಲಿ ಈ ಕಾಯ್ದೆ ಮತ್ತು ನಿಯಮಗಳು ಸರಿಯಾಗಿ ಜಾರಿಯಾಗುತ್ತಿವೆಯೇ ಇಲ್ಲವೇ ಎಂಬುವುದರ ಬಗ್ಗೆ ಮೇಲ್ವಿಚಾರಣೆ ಮಾಡಲು ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಶಾಸಕಾಂಗ ಸಮಿತಿಯನ್ನು ಸಂಯೋಜಿಸಿದೆ

(11) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ನುಳ್ಳು ಜಾತಿ ಪ್ರಮಾಣ ಪತ್ರ ಪಡೆದವರನ್ನು ಶಿಕ್ಷಿಸಲು ಕರ್ನಾಟಕ ಎಸ್‌ಸಿ ಎಸ್‌ಟಿ ಬ್ಯಾಕ್‌ವರ್ಡ್ ಕ್ಲಾಸ್ (ರಿಸರ್ವೇಷನ್ ಆಫ್ ಅಪಾಯಿಂಟ್‌ಮೆಂಟ್) ಆಕ್ಟ್, 1990 ಮತ್ತು ನಿಯಮ 2000ಗಳನ್ನು ಜಾರಿಗೆ ತರಲಾಗಿದೆ ಈ ಕಾಯ್ದೆಯಡಿ ಜಿಲ್ಲಾ ಜಾತಿ ಪರಿಶೀಲನಾ ಸಮಿತಿಯನ್ನು

ಸಂಯೋಜಿಸಲಾಗಿದೆ ಈ ನಮಿತಿ ಇಂತಹ ಪ್ರಕರಣಗಳ ಜಾತಿ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುತ್ತದೆ

(12) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 7ರ ಅಡಿ ಈ ದೌರ್ಜನ್ಯ ಪ್ರಕರಣಗಳನ್ನು ತನಿಖೆ ಮಾಡಲು ಆರಕ್ಷಕ ಉಪಾಧೀಕ್ಷಕರ ದರ್ಜೆಯ ಅಧಿಕಾರಿಗಳನ್ನು ನೇಮಕ ಮಾಡಲಾಗುತ್ತದೆ ಅವರು, ಈ ಪ್ರಕರಣಗಳಲ್ಲಿ ತನಿಖೆಯನ್ನು 30 ದಿವಸಗಳಲ್ಲಿ ಮುಗಿಸಲು ಸುತ್ತೋಲೆಗಳನ್ನು ನೀಡಲಾಗಿರುತ್ತದೆ

ಇ) ನೀಡಲಾಗಿದೆ

ಈ)1) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 12ರ ರೀತ್ಯಾ ನೊಂದವರಿಗೆ ಪರಿಹಾರ ಧನ ನೀಡುವುದು ಜೊತೆಗೆ ಇನ್ನಿತರ ಸಹಾಯ ಮತ್ತು ಪುನರ್ ವಸತಿ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ

2) ಸ್ಥಳೀಯ ಪೊಲೀಸರು ಮೇಲಿಂದ ಮೇಲೆ ದಲಿತರ ಕಾಲೋನಿಗಳಿಗೆ ಭೇಟಿ ನೀಡಿ ಅವರ ಕುಂದುಕೊರತೆಗಳನ್ನು ಆಲಿಸುತ್ತಿದ್ದಾರೆ

3) ಪೊಲೀಸ್ ಠಾಣೆ/ವ್ಯತ್ತಾಧಿಕಾರಿ/ಜಿಲ್ಲಾ ಆರಕ್ಷಕ ಅಧೀಕ್ಷಕರ ಮಟ್ಟದಲ್ಲಿ ಮೇಲಿಂದ ಮೇಲೆ ಶಾಂತಿ ಸಭೆ ನಡೆಸಲಾಗುತ್ತಿದೆ

4) ಜಿಲ್ಲಾ ಮ್ಯಾಜಿಸ್ಟ್ರೇಟ್ ನೇತೃತ್ವದಲ್ಲಿ ನಿಯಮ 17ರ ಪ್ರಕಾರ ಡಿಸ್ಟ್ರಿಕ್ಟ್ ಲೆವೆಲ್ ವಿಜಿಲೆನ್ಸ್ ಅಂಡ್ ಮಾನಿಟರಿಂಗ್ ಕಮಿಟಿ ಸಂಯೋಜಿಸಲಾಗಿದೆ

ಉ) 1) ದಲಿತರ ಮೇಲೆ ದೌರ್ಜನ್ಯವೆಸಗಿದವರ ಮೇಲೆ ಕಾನೂನಿನ ರೀತ್ಯಾ ಐಪಿಸಿ ಕಲಂ ಜೊತೆಗೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆ, 1989ನ್ನು ಸಹ ಅಳವಡಿಸಿ ಪ್ರಕರಣ ದಾಖಲು ಮಾಡಲಾಗುತ್ತದೆ

2) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ನಿಯಮ, 1995ರ ನಿಯಮ 7ರಡಿಯಲ್ಲಿ ಪ್ರಕರಣವನ್ನು ತನಿಖೆ ಮಾಡಲು ಆರಕ್ಷಕ ಉಪಾಧೀಕ್ಷಕರ ದರ್ಜೆಯ ಅಧಿಕಾರಿಗಳನ್ನು ನೇಮಕ ಮಾಡಲಾಗುತ್ತದೆ ಇಂತಹ ಪ್ರಕರಣಗಳಲ್ಲಿ ತನಿಖೆ ಮಾಡಿ 30 ದಿನಗಳೊಳಗಾಗಿ ದೋಷಾರೋಪಣೆ ಪಟ್ಟಿಯನ್ನು ಸಂಬಂಧಪಟ್ಟ ನ್ಯಾಯಾಲಯಕ್ಕೆ ಸಲ್ಲಿಸಲಾಗುತ್ತದೆ

3) ಅಪರಾಧಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಒಪ್ಪಿಸಲಾಗುತ್ತದೆ

903(582) ಡಾ ಮಹದೇವಪ್ಪ ಹೆಚ್ ಸಿ (ಟಿ ನರಸೀಪುರ) ಮಾನ್ಯ ಒಳಾಡಳಿತ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ